**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 57/2023**

ಚಾ.ಸಾ–05, ಪ್ರಾ.ಸಾ–06

| | | |
|---|---|---|
| ಹೆಸರು | : | ಪಿ.ಎನ್. ನಾಗಪ್ರಶಾಂತ್ |
| ತಂದೆಯ ಹೆಸರು | : | ಬಿ.ಕೆ. ನಾಗಪ್ಪ |
| ವಯಸ್ಸು | : | 43 |
| ವೃತ್ತಿ | : | ಸಹಾಯಕ ಆಯುಕ್ತರು, ಕೆ.ಐ.ಎ.ಡಿ.ಬಿ., ಬೆಂಗಳೂರು |
| ವಾಸ | : | ಬೆಂಗಳೂರು |

**ದಿನಾಂಕ 04.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಜೂನ್ 2019 ರಿಂದ ನವೆಂಬರ್ 2019 ರವರೆಗೆ ತಿ. ನರಸಿಪುರದಲ್ಲಿ ತಹಶೀಲ್ದಾರ್ ಆಗಿ ಕರ್ತವ್ಯ ನಿರ್ವಹಿಸಿದ್ದೆನು.

2019 ರ ಸೆಪ್ಟೆಂಬರ್ ನಲ್ಲಿ ಬೆಳಿಗ್ಗೆ ನಾನು ನನ್ನ ಕಚೇರಿಯಲ್ಲಿದ್ದಾಗ ಒಬ್ಬ ವ್ಯಕ್ತಿ ಒಂದು ಮನೆಯಲ್ಲಿ ಸಾರ್ವಜನಿಕ ವಿತರಣಾ ವ್ಯವಸ್ಥೆಯಲ್ಲಿ ವಿತರಿಸುವ ಅಕ್ಕಿಯನ್ನು ಸಂಗ್ರಹಿಸಿದ್ದಾರೆಂಬ ಮಾಹಿತಿ ನನಗೆ ಬಂದಿದ್ದು, ನಾನು ಆ ಮಾಹಿತಿಯನ್ನು ನಮ್ಮ ಕಚೇರಿಯ ಆಹಾರ ನಿರೀಕ್ಷಕರಿಗೆ ತಿಳಿಸಿರುತ್ತೇನೆ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಭಾಗಶ: ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಭಾಗಶ: ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಭಾಗಶ: ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ**

**ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಭಾಗಶ: ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 24.09.2019 ರಂದು ಈ ಮೇಲೆ ಹೇಳಿದ ಮಾಹಿತ ಬಂದಿರುತ್ತದೆ ಎಂದರೆ ಸರಿ. ತಿ. ನರಸೀಪುರ ಪಟ್ಟಣದ ಚಿಕ್ಕನಾಯಕನ ಬೀದಿ ಬಳಿಯ ಪುರಸಭೆ ಹತ್ತಿರವಿರುವ ಕಲ್ನಾರ್ ಶೀಟ್‌ನ ಮನೆಯಲ್ಲಿ ಅಕ್ಕಿ ಮತ್ತು ರಾಗಿಯನ್ನು ಅಕ್ರಮವಾಗಿ ಸಂಗ್ರಹಿಸಲಾಗಿದೆ ಎಂದು ಮಾಹಿತಿ ಬಂದಿದ್ದು, ಅದನ್ನು ಫ್ರಾಸಾ-1 ರವರಿಗೆ ಹೇಳಿರುತ್ತೇನೆ ಎಂದರೆ ಸರಿ.

**ಪಾಟೀ ಸವಾಲು : ಶ್ರೀ ಕೆ.ಎಂ.ಯು. ವಕೀಲರಿಂದ ಆರೋಪಿತನ ಪರವಾಗಿ :**

ಈ ಮೇಲೆ ಹೇಳಿದ ದಿನ ಬೆಳಿಗ್ಗೆ 9.30 ಗಂಟೆಗೆ ಕಚೇರಿಗೆ ಹೋಗಿದ್ದೆ. ಈ ಮೇಲೆ ಹೇಳಿದ ಮಾಹಿತಿಯನ್ನು ದೂರವಾಣಿ ಕರೆ ಮೂಲಕ ತಿಳಿಸಲಾಯಿತು. ನಾನು ಘಟನೆಯ ಕುರಿತು ಪೊಲೀಸರಿಗೆ ಹೇಳಿಕೆ ನೀಡಿಲ್ಲ. ಈ ಮೇಲೆ ಹೇಳಿದ ಮಾಹಿತಿ ನನಗೆ ನಿರ್ದಿಷ್ಟವಾಗಿ ಎಷ್ಟು ಗಂಟೆಗೆ ಬಂತು ಎಂದು ಹೇಳಲಾಗುವುದಿಲ್ಲ ಎಂದರೆ ಸರಿ. ಹಾಗಾಗಿ, ನಾನು ಹೇಳುವಂತೆ ಯಾವುದೇ ಮಾಹಿತಿ ನನಗೆ ಬಂದಿಲ್ಲದೆ ಇದ್ದರೂ ಕೂಡ ಅಂಕಿ ಸಂಖ್ಯೆಗೋಸ್ಕರ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಘಟನೆಯ ಮಾಹಿತಿಯನ್ನು ಫ್ರಾಸಾ-1 ರವರಿಗೆ ನೀಡಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)**
**ಓ ಹೇ ಕೇ ಸರಿ ಇದೆ**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದ., ತಿ.ನರಸೀಪುರ**